## ನಿಮ್ಮೊಡನೆ

# ಡೆಂಗಿ ಪ್ರಕರಣಗಳ ಉಲ್ಬಣ ಕಳವಳಕಾರಿ ಚಿಕಿತ್ಸೆಗೆ ಬೇಕಿದೆ ಸಮರ್ಪಕ ವ್ಯವಸ್ಥೆ

**ಸೊಳ್ಳೆಗಳ ನಿಯಂತ್ರಣ ಸೇರಿದಂತೆ ಪರಿಸರವನ್ನು ಚೊಕ್ಕಟವಾಗಿಡುವ ಅಗತ್ಯದ ಕುರಿತು ಆರೋಗ್ಯ ಇಲಾಖೆ ಮತ್ತು ಸ್ಥಳೀಯ ಆಡಳಿತಗಳು ಸಾರ್ವಜನಿಕರಿಗೆ ಅರಿವು ಮೂಡಿಸುವ ಕೆಲಸವನ್ನು ಆಂದೋಲನದ ರೂಪದಲ್ಲಿ ಕೈಗೊಳ್ಳಬೇಕಾಗಿದೆ.**

ಡೆಂಗಿ ಪ್ರಕರಣಗಳು ರಾಜ್ಯದಲ್ಲಿ ಕಳವಳ ಮೂಡಿಸಿವೆ. ಮಳೆ ತುಸು ಬಿರುಸು ಪಡೆಯುತ್ತಲೇ ಡೆಂಗಿ ಜ್ವರದಿಂದ ಬಳಲುತ್ತಿರುವವರ ಸಂಖ್ಯೆಯಲ್ಲೂ ಗಣನೀಯ ಹೆಚ್ಚಳ ಆಗತೊಡಗಿದೆ. ರಾಜ್ಯದ ಎಲ್ಲ ಜಿಲ್ಲೆಗಳಲ್ಲೂ ಈ ಜ್ವರ ಕಾಣಿಸಿಕೊಂಡಿದೆ. ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ಹೆಚ್ಚು ಪ್ರಕರಣಗಳು ವರದಿಯಾಗಿವೆ. ಚಿಕ್ಕಮಗಳೂರು, ಮೈಸೂರು, ಹಾವೇರಿ, ಶಿವಮೊಗ್ಗ, ಚಿತ್ರದುರ್ಗ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳು ರಾಜ್ಯದ ಇತರ ತೀವ್ರ ಬಾಧಿತ ಪ್ರದೇಶಗಳು. ಈ ವೈರಲ್ ಸೋಂಕು ಮಳೆಗಾಲದಲ್ಲಿ ಹೆಚ್ಚು ಬಾಧಿಸುತ್ತದೆ. ಈ ವಿಷಯ ಗೊತ್ತಿದ್ದೂ ನಿಯಂತ್ರಣಕ್ಕೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಲ್ಲಿ ಸೋಲುತ್ತಿರುವುದು ನಮ್ಮ ಆರೋಗ್ಯ ವ್ಯವಸ್ಥೆಯ ವೈಫಲ್ಯವೆಂದೇ ಭಾವಿಸಬೇಕಾಗುತ್ತದೆ.

ಹಗಲಿನಲ್ಲಿ ಕಚ್ಚುವ ಈಡಿಸ್ ಈಜಿಪ್ಟಿ ಎಂಬ ಸೊಳ್ಳೆಗಳಿಂದ ಈ ಸೋಂಕು ಹರಡುತ್ತದೆ. ಸೊಳ್ಳೆ ಕಚ್ಚಿದ ನಾಲ್ಕರಿಂದ ಹತ್ತು ದಿನಗಳ ಒಳಗೆ ರೋಗಲಕ್ಷಣ ಕಾಣಿಸಿಕೊಳ್ಳುತ್ತದೆ. ತೀವ್ರ ಜ್ವರ, ತಲೆನೋವು, ಮೈ–ಕೈ ನೋವಿನಂಥವುಗಳು ಪ್ರಮುಖ ರೋಗಲಕ್ಷಣಗಳು. ಪ್ಲೇಟ್‌ಲೆಟ್ ಸಂಖ್ಯೆ ಕಡಿಮೆಯಾಗುವುದು ಮತ್ತು ಇತರ ರೋಗಲಕ್ಷಣಗಳಿಂದ ಡೆಂಗಿ ಜ್ವರವನ್ನು ದೃಢಪಡಿಸಲಾಗುತ್ತದೆ. ಆದರೆ, ಎಲ್ಲರಿಗೂ ಒಂದೇ ರೀತಿ ಅನ್ವಯವಾಗುವಂಥ ನಿರ್ದಿಷ್ಟ ಚಿಕಿತ್ಸೆ, ಲಸಿಕೆ ಇಲ್ಲದೇ ಇರುವುದು ಸಮಸ್ಯೆ. ರೋಗಲಕ್ಷಣ ಅನುಸಾರ ಚಿಕಿತ್ಸೆ ನೀಡಬೇಕಾಗುತ್ತದೆ ಎಂಬುದು ವೈದ್ಯರ ಅಭಿಮತ.

ಇದಕ್ಕೆ ಮುಂಜಾಗ್ರತೆಯೇ ಮದ್ದು. ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳುವುದರ ಮೂಲಕ ಸೊಳ್ಳೆ ಉತ್ಪತ್ತಿಯನ್ನು ತಡೆಯಬಹುದು. ತೆರೆದ ಪಾತ್ರೆ ಅಥವಾ ಮುಚ್ಚಳ ಇಲ್ಲದಿರುವ ಇನ್ನಿತರ ವಸ್ತುಗಳಲ್ಲಿ ಸಂಗ್ರಹವಾಗುವ ನೀರಿನಲ್ಲೂ ಸೊಳ್ಳೆಗಳು ಉತ್ಪತ್ತಿಯಾಗುತ್ತವೆ. ಅದಕ್ಕೆ ಆಸ್ಪದ ಕೊಡದೇ ಇರುವುದು ಅತ್ಯಂತ ಜಾಣ ನಡೆ. ಸೋಂಕಿಗೆ ಒಳಗಾಗಿ ನರಳುವ ಬಾಧೆಗಿಂತ ಈ ಬಗೆಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವುದು ಸುಲಭ ಮತ್ತು ಅಪೇಕ್ಷಣೀಯ. ಆದರೆ ಈ ದಿಸೆಯಲ್ಲಿ ತಿಳಿವಳಿಕೆ ಮೂಡಿಸುವ ಕೆಲಸ ನಿರಂತರವಾಗಿ ನಡೆಯಬೇಕು. ಅದು ನಿರೀಕ್ಷಿತ ಮಟ್ಟದಲ್ಲಿ ಆಗುತ್ತಿಲ್ಲ ಎಂಬುದು ದುರದೃಷ್ಟಕರ.

ಚಿಕಿತ್ಸೆಗಿಂತಲೂ ರೋಗವನ್ನು ನಿಯಂತ್ರಿಸುವುದೇ ಹೆಚ್ಚು ಪರಿಣಾಮಕಾರಿ ಎನ್ನುವ ಪಾಠವನ್ನು ನಮ್ಮ ಅಧಿಕಾರಿಗಳು ಒಳಗೊಂಡಂತೆ ನಾಗರಿಕರು ಪದೇ ಪದೇ ಮರೆಯುತ್ತಿರುವುದರಿಂದ ಇಂತಹ ಸೋಂಕುಗಳು ಯಾವುದೋ ಒಂದು ರೂಪದಲ್ಲಿ ವಕ್ಕರಿಸುತ್ತಲೇ ಇರುತ್ತವೆ. ಸೊಳ್ಳೆ ಉತ್ಪತ್ತಿ ಹೆಚ್ಚಾಗುತ್ತಿರುವುದೇ ಡೆಂಗಿ ಉಲ್ಬಣಕ್ಕೆ ಕಾರಣ ಎಂಬುದು ಎಲ್ಲರೂ ಬಲ್ಲ ಸಂಗತಿ. ಆದರೆ ಅದನ್ನು ತಡೆಯಲು ಬಿಬಿಎಂಪಿ ಒಳಗೊಂಡಂತೆ ಸ್ಥಳೀಯ ಆಡಳಿತಗಳು ಪರಿಣಾಮಕಾರಿಯಾಗಿ ಕೆಲಸ ಮಾಡುತ್ತಿಲ್ಲ. ಫಾಗಿಂಗ್ ವಿಷಯದಲ್ಲಿ ಕೃತಿಗಿಂತ ಮಾತೇ ಹೆಚ್ಚು! ಅಲ್ಲದೆ, ರಸ್ತೆಗಳಲ್ಲಿ ಮಳೆನೀರು ನಿಲ್ಲದಂತೆ ನೋಡಿಕೊಳ್ಳುವಲ್ಲಿ ಅವು ವಿಫಲವಾಗಿವೆ. ಚರಂಡಿ ಹಾಗೂ ಮೋರಿಗಳನ್ನು ಸುಸ್ಥಿತಿಯಲ್ಲಿಡಲು ಸಹ ಅವುಗಳಿಗೆ ಸಾಧ್ಯವಾಗುತ್ತಿಲ್ಲ. ಈ ಕಹಿಸತ್ಯ ಪ್ರತಿನಿತ್ಯ ನಮಗೆ ಕಣ್ಣಿಗೆ ಕಾಣುವಂತಹುದು. ಇದನ್ನು ಅರಿಯಲು ವಿಶೇಷ ಪರಿಣತಿಯೋ ಅಧ್ಯಯನವೋ ಬೇಕಾಗಿಲ್ಲ.

ಸೋಂಕು ಪತ್ತೆಗೆ ಪರೀಕ್ಷೆ ಪ್ರಮಾಣವನ್ನು ಹೆಚ್ಚಿಸಿರುವುದಾಗಿ ಸರ್ಕಾರ ಹೇಳಿದೆ. ಇದು, ಸ್ವಾಗತಾರ್ಹವಾದರೂ ಚಿಕಿತ್ಸೆಗೆ ಸಮರ್ಪಕ ವ್ಯವಸ್ಥೆ ಮಾಡುವುದು ಕೂಡ ಅಷ್ಟೇ ಮುಖ್ಯ. ಚಿಕಿತ್ಸೆಗೆ ಕೆಲವು ಖಾಸಗಿ ಆಸ್ಪತ್ರೆಗಳು ವಿಪರೀತ ಶುಲ್ಕ ವಿಧಿಸುತ್ತಿವೆ ಎಂಬ ದೂರುಗಳಿವೆ. ಇದಕ್ಕೆ ಸ್ಪಂದಿಸಿ ಆರೋಗ್ಯ ಇಲಾಖೆಯು ಕೆಲವು ಪರೀಕ್ಷೆಗಳಿಗೆ ದರ ನಿಗದಿಪಡಿಸಿ ಆದೇಶ ಹೊರಡಿಸಿರುವುದು ಸರಿಯಾಗಿಯೇ ಇದೆ. ಅಂತೆಯೇ 'ಡೆಂಗಿ ಪ್ರಕರಣಗಳು ಹೆಚ್ಚು ವರದಿಯಾಗುತ್ತಿರುವ ಸ್ಥಳಗಳಲ್ಲಿ ಜ್ವರ ಕ್ಲಿನಿಕ್ ತೆರೆಯಬೇಕು. ಅಂತಹ ಪ್ರದೇಶಗಳಲ್ಲಿ ಯಾರಿಗಾದರೂ ಜ್ವರದ ಲಕ್ಷಣ ಕಂಡುಬಂದರೆ ಅಂಥವರನ್ನು ಕಡ್ಡಾಯವಾಗಿ ಡೆಂಗಿ ಪರೀಕ್ಷೆಗೆ ಒಳಪಡಿಸಬೇಕು' ಎಂದು ಆರೋಗ್ಯ ಸಚಿವರು ಸೂಚಿಸಿದ್ದಾರೆ. ಇದು, ತಕ್ಷಣ ಕ್ರಿಯೆಗೆ ಇಳಿಯುವಂತೆ ನೋಡಿಕೊಳ್ಳುವ ಹೊಣೆಗಾರಿಕೆಯೂ ಅವರದೇ ಆಗಿದೆ.

ಸೊಳ್ಳೆಗಳ ನಿಯಂತ್ರಣ ಸೇರಿದಂತೆ ಪರಿಸರವನ್ನು ಚೊಕ್ಕಟವಾಗಿಡುವ ಅಗತ್ಯದ ಕುರಿತು ಆರೋಗ್ಯ ಇಲಾಖೆ ಮತ್ತು ಸ್ಥಳೀಯ ಆಡಳಿತಗಳು ಸಾರ್ವಜನಿಕರಿಗೆ ಅರಿವು ಮೂಡಿಸುವ ಕೆಲಸವನ್ನು ಆಂದೋಲನದ ರೂಪದಲ್ಲಿ ಕೈಗೊಳ್ಳಬೇಕಾಗಿದೆ. ಆಶಾ ಕಾರ್ಯಕರ್ತೆಯರು ಮನೆ ಮನೆಗೆ ಭೇಟಿ ನೀಡಿ ಜನರಲ್ಲಿ ಜಾಗೃತಿ ಮೂಡಿಸಬೇಕು. ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸಾ ಸೌಲಭ್ಯ ಮತ್ತು ಔಷಧಿಗಳ ಲಭ್ಯತೆಯನ್ನು ಖಾತರಿಪಡಿಸಬೇಕು. ಆರೋಗ್ಯ ಇಲಾಖೆಯ ಉನ್ನತ ಅಧಿಕಾರಿಗಳು ಈ ದಿಸೆಯಲ್ಲಿ ನಿರಂತರವಾಗಿ ನಿಗಾ ವಹಿಸಬೇಕು. ಈಡಿಸ್ ಸೊಳ್ಳೆಗಳ ಮೂಲಕವೇ ಝೀಕಾ ವೈರಾಣು ಸೋಂಕು ಕೂಡ ಹಬ್ಬುತ್ತದೆ. ಈ ನಿಟ್ಟಿನಲ್ಲಿಯೂ ಎಚ್ಚರ ವಹಿಸುವುದು ಅಗತ್ಯ.

■ ಎನ್. ಉದಯಕುಮಾರ್



ಈಶ್ವರ್